# ಡೆವಿಲ್ ಕ್ರೇಜ್.. ಫಸ್ಟ್ ಡೇ ಟಿಕೆಟ್ ಸೋಲ್ಡ್ ಔಟ್.. ಫ್ಯಾನ್ಸ್ ಹೇಳ್ತಿರೋದೇನು..?

ದರ್ಶನ್ ಈಗ ಹೊರಗೆ ಇದ್ದಿದ್ದರೆ ಫ್ಯಾನ್ಸ್ ಹಬ್ಬವನ್ನೇ ಮಾಡ್ತಾ ಇದ್ದರು. ಹಾಗಂತ ಈಗಲೂ ಸುಮ್ಮನೆ ಏನು ಇಲ್ಲ. ಭರ್ಜರಿಯಾಗಿಯೇ ಡೆವಿಲ್ ಪ್ರಮೋಷನ್ ಮಾಡ್ತಿದ್ದಾರೆ. ಹೀಗಾಗಿಯೇ 'ದಿ ಡೆವಿಲ್' ಸಿನಿಮಾ ರಿಲೀಸ್ಗೂ ಮುನ್ನವೇ ಅಂದಾಜು 3.5 ಕೋಟಿ ರು.ಗೂ ಅಧಿಕ ಸಂಗ್ರಹ ಮಾಡಿದೆ. ಈ ಸಿನಿಮಾ ನಿರ್ಮಾಣ ಸಂಸ್ಥೆ ಜೈ ಮಾತಾ ಮಾತಾ ಕಂಬೈನ್ಸ್ ಶನಿವಾರ ಈ ಕುರಿತು ಪೋಸ್ಟರ್ ಬಿಡುಗಡೆ ಮಾಡಿ, 'ಒಂದು ಐಕಾನ್, ಒಂದು ಅತ್ಯುತ್ಸಾಹದ ಅಭಿಮಾನಿ ಸೇನೆ, ಇವರಿಂದ ಸಂಗ್ರಹವಾದ ಮೊತ್ತ 2 ಕೋಟಿ 52 ಲಕ್ಷ' ಎಂದು ತಿಳಿಸಿತ್ತು.

ಸದ್ಯ ಗಂಟೆಗೆ 11 ಸಾವಿರ ಟಿಕೆಟ್ ಬುಕಿಂಗ್ ಆಗಿದ್ದು, 55,000ಕ್ಕೂ ಹೆಚ್ಚು ಫ್ಯಾನ್ಸ್ ಶೋಗಳ ಟಿಕೆಟ್ ಸೇಲಾಗಿದೆ ಎನ್ನಲಾಗಿದೆ. ದರ್ಶನ್ ಸಿನಿಮಾವನ್ನು ಗೆಲ್ಲಿಸಲೇಬೇಕೆಂಬ ಛಲಕ್ಕೆ ಬಿದ್ದಿರುವ ಅವರ ಅಭಿಮಾನಿಗಳಿಂದಾಗಿ ಫಸ್ಟ್ ಡೇ ಫಸ್ಟ್ ಶೋ ಹೌಸ್ಫುಲ್ ಆಗಿದೆ. ಈ ಹಿನ್ನೆಲೆಯಲ್ಲಿ ಶೋಗಳ ಸಂಖ್ಯೆ ಹೆಚ್ಚಳವಾಗುತ್ತಿದೆ.ಡಿಸೆಂಬರ್ 11ರ ಗುರುವಾರ ಬೆಳಗ್ಗೆ 6 ಗಂಟೆಗೆ ಮೊದಲ ಶೋ ಆರಂಭವಾಗುತ್ತಿದೆ. ಗರಿಷ್ಟ ಟಿಕೆಟ್ ದರ 900 ರು.ವರೆಗೂ ಏರಿಕೆಯಾಗಿದೆ. ಹಲವೆಡೆ 500 ರು. ನಿಂದ 600



ರು.ವರೆಗೂ ಟಿಕೆಟ್ ದರವಿದೆ.

ಇನ್ನೊಂದೆಡೆ ಸಿನಿಮಾ ಟ್ರೇಲರ್ ವೀಕ್ಷಣೆಗೆ ಅತ್ಯುತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಇತ್ತ ದಿ ಡೆವಿಲ್ ಮೂವಿ ರಿಲೀಸ್ ಇನ್ನು ಜಸ್ಟ್ 3 ದಿನ ಬಾಕಿ ಇವೆ. ಭರ್ತಿ ಎರಡು ವರ್ಷಗಳ ಬಳಿಕ ಬಿಗ್ಸ್ಕ್ರೀನ್ ಮೇಲೆ ಕಾಣಿಸಿಕೊಳ್ತಾ ಇರೋ ದರ್ಶನ್ನ ನೋಡೋದಕ್ಕೆ ಫ್ಯಾನ್ಸ್ ತುದಿಗಾಲಲ್ಲಿ ನಿಂತಿದ್ದಾರೆ. ಒಂದೆಡೆ ತಮ್ಮ ಅಚ್ಚುಮೆಚ್ಚಿನ ನಟ ಡಿ ಬಾಸ್ ಸಂಕಷ್ಟದಲ್ಲಿರುವುದರಿಂದ ಅಭಿಮಾನಿಗಳ ಹೃದಯ ಕಾತರಗೊಂಡಿದೆ. ಆದರೆ ಮತ್ತೊಂದೆಡೆ 'ಡೆವಿಲ್' ಚಿತ್ರದ ಟ್ರೇಲರ್ಗಳಿಂದ ಮೂಡಿದ ಅಬ್ಬರ, ಡೈಲಾಗ್ ದರ್ಶನ್ ಅವರ ಮಾಸ್ ಅಭಿಮಾನಿಗಳಿಗೆ ಕೊಟ್ಟಿರುವ ಮಾತುಗಳು ಅಭಿಮಾನಿಗಳಲ್ಲಿ ಹೊಸ ಅಲೆ ಹುಟ್ಟಿಸಿವೆ.

"ಕೊಂಚ ಹೊತ್ತು ಸೂರ್ಯನಿಗೆ ಗ್ರಹಣ ಹಿಡಿದರೂ, ಅವನು ಮರೆವಾಗೋದಿಲ್ಲ" ಡೈಲಾಗ್, ದರ್ಶನ್ ಮತ್ತೆ ಆಚೆ ಬಂದು ಮೊದಲಿನ ರೀತಿ ಸಿನಿಮಾ ಮಾಡುತ್ತಾರೆ ಎಂಬ ನಂಬಿಕೆ ಅಭಿಮಾನಿಗಳ ಮನದಾಳದಲ್ಲಿ ಬೇರೂರಿದೆ.ಜೈಲಿನಲ್ಲಿರುವಾಗಲೇ ಅವರ ಚಿತ್ರ ಬಿಡುಗಡೆ ಆಗ್ತಿದೆ ಎಂಬುದು ಹಲವು ರೀತಿಯ ಚರ್ಚೆಗಳಿಗೆ ಕಾರಣವಾಗಿದೆ.


ಇದು ದರ್ಶನ್ ಅವರ ಸ್ಟಾರ್ಡಮ್ಗೆ ಬಂದ ಪರೀಕ್ಷೆ ಎಂದು ಪರಿಗಣಿಸುತ್ತಿದ್ದಾರೆ. ಆದರೆ ಏನೇ ಆಗಲಿ, ಅಭಿಮಾನಿಗಳ ನಿಷ್ಠೆ ಮಾತ್ರ ಬೆಂಕಿಯಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ, ಚಿತ್ರಮಂದಿರಗಳಲ್ಲಿ, ಮತ್ತು ಫ್ಯಾನ್ ಕ್ಲಬ್ಗಳಲ್ಲಿ "ನಮ್ಮ ದರ್ಶನ್" ಎಂಬ ನಾದ ಗಟ್ಟಿ ಆಗುತ್ತಿದೆ. ಅಭಿಮಾನಿಗಳೆಲ್ಲಾ ಪ್ರಚಾರ ಕಾರ್ಯದಲ್ಲಿ ತೊಡಗಿದ್ದಾರೆ.

## ಹಳೆ ವೈಷಮ್ಯ: ಮಾರಕಾಸ್ತ್ರಗಳಿಂದ ಹೊಡೆದು ವ್ಯಕ್ತಿ ಕೊಲೆ



**ಕಲಬುರಗಿ,ಡಿ.8–**ಹಳೆ ವೈಷಮ್ಯದಿಂದ ವ್ಯಕ್ತಿಯೋರ್ವರನ್ನು ಮಾರಕಾಸ್ತ್ರಗಳಿಂದ ಹೊಡೆದು ಕೊಲೆ ಮಾಡಿರುವ ಘಟನೆ ಕಮಲಾಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಶನಿವಾರ ರಾತ್ರಿ ನಡೆದಿದೆ. ಕಮಲಾಪುರ ಪಟ್ಟಣದ ನಿವಾಸಿ ಮುಹಮ್ಮದ್ ಹನೀಫ್ (65) ಕೊಲೆಯಾದವರು.ಅದೇ ಗ್ರಾಮದ ರಿಝ್ವಾನ್(25) ಎಂಬಾತ ಕೊಲೆ ಕೃತ್ಯ ನಡೆಸಿರುವುದಾಗಿ ತಿಳಿದುಬಂದಿದೆ.ಈ ಹಿಂದೆ ರಿಝ್ವಾನ್ ಹಾಗೂ ಮೃತ ಹನೀಫ್ ನಡುವೆ ಜಗಳವಾಗಿತ್ತು. ಇದೇ ಕಾರಣಕ್ಕೆ ಹಳೆ ವೈಷಮ್ಯ ಇಟ್ಟುಕೊಂಡು ಕಮಲಾಪುರದ ಜೇವಣಗಿ ರಸ್ತೆಯ ಕೆಇಬಿ ಕಚೇರಿ ಬಳಿ ಹನೀಫ್ ಅವರನ್ನು ರಿಝ್ವಾನ್ ಕೊಲೆ ಮಾಡಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಸ್ಥಳೀಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.ಈ ಬಗ್ಗೆ ಕಮಲಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ಉತ್ತರ ಕರ್ನಾಟಕದ ಸಮಸ್ಯೆ ಚರ್ಚೆಗೆ ಆದ್ಯತೆ



**ಬೆಳಗಾವಿ,ಡಿ. 8–**ವಿಧಾನ ಪರಿಷತ್ ಕಲಾಪದಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳು, ವಿಷಯಗಳ ಚರ್ಚೆಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪರಿಷತ್ ಕಲಾಪದಲ್ಲಿ ಕಳೆದ ಅಧಿವೇಶನಗಳಲ್ಲಿ ಕರ್ನಾಟಕದ ಸಮಸ್ಯೆಗಳು, ವಿಷಯಗಳ ಕುರಿತು ಹೆಚ್ಚಿನ ಚರ್ಚೆ ನಡೆದಿಲ್ಲ, ಆದರೆ ಈ ಬಾರಿ ಅಧಿವೇಶನದಲ್ಲಿ ಕರ್ನಾಟಕದ ಸಮಸ್ಯೆಗಳು, ವಿಷಯಗಳ ಚರ್ಚೆಗೆ ಹೆಚ್ಚು ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ದಕ್ಷಿಣ ಕರ್ನಾಟಕದ ಶಾಸಕರು ಉತ್ತರ ಕರ್ನಾಟಕದ ಜನರ ಸಮಸ್ಯೆ ಚರ್ಚಿಸುವುದಕ್ಕೆ ಅವಕಾಶ ನೀಡಲಾಗುವುದು ಪ್ರತಿದಿನಪ್ರಶ್ನೋತ್ತರ ಮುಗಿದ ಬಳಿಕ ಉತ್ತರ ಕರ್ನಾಟಕದ ಸಮಸ್ಯೆಗಳ ಕುರಿತು ಚರ್ಚೆ ಮಾಡುತ್ತೇವೆ. ಕಳೆದ ಅಧಿವೇಶನದಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಉತ್ತರ ಕರ್ನಾಟಕದ ಶಾಸಕರು ಮಾತನಾಡಲಿಲ್ಲ. ದಕ್ಷಿಣ ಕರ್ನಾಟಕದ ಶಾಸಕರು ಮಾತನಾಡಿದ್ದಾರೆ. ಅದನ್ನು ಬರೆದು ಇಟ್ಟಿದ್ದೇನೆ. ಫೋನ್ ಮಾಡಿ ಎಲ್ಲಾ ಶಾಸಕರಿಗೂ ಹೇಳುತ್ತಿದ್ದೇನೆ ಎಂದು ಹೇಳಿದರು.

ಸದನದಲ್ಲಿ ಭಾಗವಹಿಸುವಂತೆ ಈಗಾಗಲೇ 38 ಜನರಿಗೆ ಮಾತನಾಡಿದ್ದೇನೆ. ಉಳಿದವರ ಜೊತೆಯೂ ಮಾತನಾಡುತ್ತೇನೆ. ಎಲ್ಲರೂ ಅಧಿವೇಶನದಲ್ಲಿ ಭಾಗವಹಿಸಿ ಸದನದ ಗೌರವ ಹೆಚ್ಚಿಸಬೇಕು ಎಂದು ಹೊರಟ್ಟಿ ಮನವಿ ಮಾಡಿದರು.

ಸಭಾಪತಿ ಹುದ್ದೆಯಿಂದ ಕೆಳಗಡೆ ಇಳಿಸುವ ವಿಚಾರದ ಕುರಿತು ಮಾತನಾಡಿದ ಅವರು, ನಾನು ಒಂದು ಸಲ ಪರಿಷತ್ ಸಭಾಪತಿ ಆಗಿದ್ದೇನೆ. ಎಷ್ಟು ವರ್ಷ ಆಗಿದ್ದರೂ ಮಾಜಿ ಆಗಲೇಬೇಕು. ವಿಧಾನ ಪರಿಷತ್ ಸಭಾಪತಿ ಹುದ್ದೆ ಬಗ್ಗೆ ನಾನು ತಲೆ ಕೆಡೆಸಿಕೊಳ್ಳುವುದಿಲ್ಲ. ಸರ್ಕಾರ ಮತ್ತು ಶಾಸಕರು ತೆಗೆದುಕೊಳ್ಳುವ ತೀರ್ಮಾನಕ್ಕೆ ನಾನು ಬದ್ಧ ಎಂದು ತಿಳಿಸಿದರು.

ಸದನದಲ್ಲಿ ನನ್ನ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವ ಸಮಯ ಬಂದರೆ ನಿಯಮಾವಳಿ ಪ್ರಕಾರ ನಡೆದುಕೊಳ್ಳುವೆ ಎಂದು ಹೇಳಿದರು.

ವಿಧಾನ ಪರಿಷತ್ ನ ಖಾಲಿ ಹುದ್ದೆಗಳ ನೇಮಕಾತಿಯಲ್ಲಿ ಯಾವುದೇ ರೀತಿಯ ಅವ್ಯವಹಾರ ನಡೆದಿಲ್ಲ,30 ಹುದ್ದೆಗಳನ್ನು ಕರ್ನಾಟಕ ಪರೀಕ್ಷೆ ಪ್ರಾಧಿಕಾರ,(ಕೆಇಎ) ಪರೀಕ್ಷೆ ನಡೆಸಿ ಹೆಚ್ಚು ಅಂಕಗಳಿಸಿದವರ ಪಟ್ಟಿ ನೀಡಿದ್ದು,ಅದನ್ನು ಪರಿಶೀಲನೆ ನಡೆಸಿ ಕ್ರಮಮ ಕೈಗೊಳ್ಳಲಾಗಿದೆ ಎಂದು ಸ್ಪಷ್ಟಪಡಿಸಿದರು..

# ಶಹಾಬಾದ: ಸರ್ಕಾರಿ ಶಾಲೆ ಉಳಿಸಲು ಆಗ್ರಹಿಸಿ ಎಐಡಿಎಸ್ಓ ಪ್ರತಿಭಟನೆ




**ಶಹಾಬಾದ, ಡಿ.8–** ರಾಜ್ಯದ ಕರ್ನಾಟಕ ಪಬ್ಲಿಕ್ ಶಾಲೆಗಳ (ಕೆಪಿಎಸ್) ಮ್ಯಾಗ್ನೆಟ್ ಶಾಲೆಗಳ ಯೋಜನೆಯ ಅಡಿಯಲ್ಲಿ, ಸರ್ಕಾರವು ರಾಜ್ಯದಾದ್ಯಂತ 40,000ಕ್ಕೂ ಹೆಚ್ಚು ಶಾಲೆಗಳನ್ನು ವಿಲೀನಗೊಳಿಸುತ್ತಿರುವುದನ್ನು ಖಂಡಿಸಿ ಮತ್ತು ಸರ್ಕಾರಿ ಶಾಲೆ ಉಳಿಸಲು ಆಗ್ರಹಿಸಿ ಎಐಡಿಎಸ್ಓ ನೆತೃತ್ವದಲ್ಲಿ ಶಹಾಬಾದ ಪಟ್ಟಣದಲ್ಲಿ ಪ್ರತಿಭಟನಾ ಪ್ರದರ್ಶನ ಕೈಗೊಳ್ಳಲಾಯಿತು.

ಶಹಾಬಾದ ತಾಲೂಕಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ತರನಳ್ಳಿ ಶಾಲೆಯನ್ನು ಮ್ಯಾಗ್ನೆಟ್ ಶಾಲೆಯೆಂದು ಗುರುತಿಸಲಾಗಿದೆ. ಸರಕಾರಿ ಹಿರಿಯ ಪ್ರಾಥಮಿಕ ಶಂಕರಲಿಂಗ ಗುಡಿ ಶಾಲೆ, ಸರಕಾರಿ ಹಿರಿಯ ಪ್ರಾಥಮಿಕ ಉರ್ದು ಶಾಲೆ ಹಳೆ ಶಹಾಬಾದ, ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಆಶ್ರಯ ಕಾಲೋನಿ ರಾಮಘಾಡ, ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಶಿಬಿರಕಟ್ಟ ಶಾಲೆ ಗಳನ್ನು ಕೆಪಿಎಸ್ ಗೆ ವಿಲೀನಗೊಳಿಸಿ ಸಂಪೂರ್ಣವಾಗಿ ಮುಚ್ಚುತ್ತಿರುವದನ್ನು ಖಂಡಿಸಿ ಶಹಾಬಾದ ನಗರದ ಬಸವೇಶ್ವರ ವೃತ್ತದಲ್ಲಿ ಬೃಹತ್ ಪ್ರತಿಭಟನೆಯ ಮೂಲಕ ತಹಸಿಲ್ದಾರರ ಮುಖಾಂತರ ಶಿಕ್ಷಣ ಸಚಿವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಎಐಡಿಎಸ್ಓ ಜಿಲ್ಲಾ ಕೌನ್ಸಿಲ್ ಅಧ್ಯಕ್ಷರಾದ ತುಳಜರಾಮ ಎನ್ ಕೆ ಅವರು ಮಾತನಾಡುತ್ತಾ, ರಾಜ್ಯ ಸರ್ಕಾರವು ಏಕಖ ಮ್ಯಾಗ್ನೆಟ್ ಶಾಲೆ ಎಂಬ ಹೆಸರಿನಲ್ಲಿ ರಾಜ್ಯ ಸರ್ಕಾರ ಸಂಪೂರ್ಣವಾಗಿ ಸರ್ಕಾರಿ ಶಾಲೆಗಳನ್ನು ಮುಚ್ಚಲು ಸಿದ್ಧತೆ ನಡೆಸುತ್ತಿದೆ. "ಗುಣಮಟ್ಟ" ಮತ್ತು "ಮಾದರಿ ಶಾಲೆಗಳು" ಎಂಬ ಆಕರ್ಷಕ ಪದಗಳ ಹಿಂದೆ, ಉಚಿತ ಮತ್ತು ಸಾರ್ವತ್ರಿಕ ಶಿಕ್ಷಣದ ನಮ್ಮ ನವೋದಯ ಚಿಂತಕರು, ಕ್ರಾಂತಿಕಾರಿಗಳು ಗಳಿಸಿದ ಆಶಯವನ್ನು ನಾಶಪಡಿಸುವ ಒಂದು ನಿಷ್ಕರುಣ ಪ್ರಯತ್ನ ಅಡಗಿದೆ.

ಸರ್ಕಾರವು ಪ್ರತಿ ಹಳ್ಳಿಗೆ ಬಸ್ ಬಿಡುತ್ತೇವೆ ಎಂದು ರೈಲು ಬಿಡುತ್ತಿದ್ದಾರೆ. ಆದರೆ ಈಗಾಗಲೇ ಎಷ್ಟೋ ಹಳ್ಳಿಗಳಲ್ಲಿ ಬಸ್ ಇಲ್ಲದೆ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸುತ್ತಿದ್ದಾರೆ. ವಾಸ್ತವತೆ ಹೀಗಿರುವಾಗ, 6–7 ಕೀ.ಮಿ ದೂರದ ಶಾಲೆಯನ್ನು ತಲುಪಲಾಗದೆ ಬಡ ಮಕ್ಕಳು ಶಿಕ್ಷಣದಿಂದ ದೂರ ಉಳಿಯುತ್ತಾರಷ್ಟೇ! ಈ ಯೋಜನೆಗೆ ಏಷಿಯನ್ ಡೆವಲಪ್ಮೆಂಟ್ ಬ್ಯಾಂಕಿನಿಂದ ಈಗಾಗಲೇ 2,000 ಕೋಟಿ ಸಾಲ ಪಡೆದಿರುವ ಮತ್ತು 10,000 ಕೋಟಿ ಸಾಲ ಪಡೆಯಲಿರುವ ಸರ್ಕಾರವು ಕಾರ್ಪೊರೇಟ್ ಹಿತಾಸಕ್ತಿ ಕಾಪಾಡಲು ಸರ್ಕಾರಿ ಶಾಲೆಗಳನ್ನು ಮುಚ್ಚುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರಿ ಶಾಲೆಗಳು ಮುಚ್ಚೋದಿಲ್ಲ ಎಂಬ ಶಿಕ್ಷಣ ಮಂತ್ರಿಗಳ ಮಾತುಗಳು ಕೇವಲ ಜನಗಳನ್ನು ದಾರಿ ತಪ್ಪಿಸುವತ್ತ ಸಾಗುತ್ತೇವೆ, ಇನ್ನೊಂದು ಕಡೆ ಶಿಕ್ಷಣ ಇಲಾಖೆ ಜಾರಿ ಮಾಡುತ್ತಿರುವಂತಹ ವರದಿಗಳು ಸಂಪೂರ್ಣವಾಗಿ ಶಾಲೆಗಳನ್ನ ಅತಿ ವೇಗದಲ್ಲಿ ಮುಚ್ಚಲು ಮುನ್ನುಗುತ್ತಿದೆ ಇದು ದುಡಿಯುವ ಜನಗಳಿಗೆ ಸರ್ಕಾರಗಳು ಬಗೆಯುತ್ತಿರುವಂತಹ ದ್ರೋಹ. ರಾಜ್ಯ ಸರ್ಕಾರ ಈ ಕೂಡಲೇ ಎಚ್ಚೆತ್ತುಕೊಂಡು ಒಂದೇ ಒಂದು ಸರ್ಕಾರಿ ಶಾಲೆಯೂ ಕೂಡ ಮುಚ್ಚದಂತೆ ಲಿಖಿತ ರೂಪದಲ್ಲಿ ಆದೇಶ ಹೊರಡಿಸಬೇಕು ಎಂದು ಆಗ್ರಹಿಸಿದರು.

ಎಐಡಿಎಸ್ಓ ಜಿಲ್ಲಾ ಕೌನ್ಸಿಲ್ ಕಾರ್ಯದರ್ಶಿ ವೆಂಕಟೇಶ ದೇವದುರ್ಗ ಮಾತನಾಡುತ್ತಾ, ಬಡವರ ಮಕ್ಕಳು ಓದುವ ಗ್ರಾಮೀಣ ಭಾಗದ ಹಾಗೂ ತಾಂಡಾಗಳ ಶಾಲೆಗಳನ್ನು ಸೌಲಭ್ಯ ಒದಗಿಸಿ ಅಭಿವೃದ್ಧಿ ಪಡಿಸಬೇಕಾದ ಸರ್ಕಾರವೇ ಇಂದು ಶಾಲೆಗಳನ್ನು ಮುಚ್ಚುತ್ತಿದೆ. ಬದಲಿಗೆ ಖಾಸಗೀ ಶಿಕ್ಷಣ ಸಂಸ್ಥೆಗಳ ಲಾಭಕ್ಕಾಗಿ ಸರ್ಕಾರಿ ಶಾಲೆಗಳನ್ನು ಮುಚ್ಚಿ ಹಣವಂತರಿಗೆ ಮಾತ್ರ ಶಿಕ್ಷಣ ಎಂಬ ಷಡ್ಯಂತ್ರವನ್ನು ಸರ್ಕಾರ ರಚಿಸಿದೆ. ಸರ್ಕಾರ ಜನರ ಹೋರಾಟವನ್ನು ಎದುರಿಸಲು ಸಿದ್ಧವಾಗಲಿ ಎಂದು ಎಚ್ಚರಿಕೆ ನೀಡಿದರು. ಉಚಿತ ಸಾರಿಗೆ ವ್ಯವಸ್ಥೆ ಮಾಡುವುದಾಗಿ ತಿಳಿಸಿ ಪಾಲಕರು ಮತ್ತು ಎಸ್ ಡಿ ಎಮ್ ಸಿ(ಖಆಡಿಅ) ಯವರ ಮೇಲೆ ಸಾರಿಗೆ ವ್ಯವಸ್ಥೆಯ ಹೊರೆ ಹೊರೆಸಲಾಗುತ್ತಿದೆ. ಪ್ರತಿಯೊಂದು ಶಾಲೆಯು ತನ್ನ ಆದಾಯದ ಮೂಲವನ್ನು ತಾವೇ ಹುಡುಕಿಕೊಳ್ಳಬೇಕು ಎಂದು ಹೇಳಿರುವುದು ಉಚಿತ ಹಾಗೂ ಸಾರ್ವತ್ರಿಕ ಶಿಕ್ಷಣದ ಆಶಯಗಳಿಗೆ ವಿರುದ್ಧವಾಗಿದೆ. ರಾಜ್ಯದ ಬಡ ರೈತ–ಕಾರ್ಮಿಕರ ಮಕ್ಕಳಿಂದ ಶಿಕ್ಷಣವನ್ನು ಸಂಪೂರ್ಣವಾಗಿ ಕಸೆದುಕೊಳ್ಳುವ ಈ ನೀತಿ ಕೂಡಲೇ ಕೈಬಿಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ನೂರಾರು ವಿದ್ಯಾರ್ಥಿಗಳು ಹಾಗೂ ಪೋಷಕರು ನವೋದಯ ಹಾಗೂ ಸ್ವಾತಂತ್ಯ ಹೋರಾಟದ ಮಹಾನ್ ವ್ಯಕ್ತಿಗಳ ಭಾವಚಿತ್ರ ಹಿಡಿದು, ಘೋಷಣೆಗಳನ್ನು ಕೂಗುತ್ತ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಪ್ರತಿಭಟನೆಯಲ್ಲಿ ಎಐಡಿಎಸ್ಓ ಜಿಲ್ಲಾ ಜಂಟಿ ಕಾರ್ಯದರ್ಶಿ ಬಾಬು ಪವರ್, ಜಿಲ್ಲಾ ಖಜಾಂಚಿ ಸ್ಫೂರ್ತಿ ಗುರುಜಲ್ಕರ್, ಜಿಲ್ಲಾ ಜಂಟಿ ಕಾರ್ಯದರ್ಶಿಗಳಾದ ದೇವರಾಜ್ ರಾಜೋಳ,ರಾಹುಲ್ ಜಾಧಾವ್, ಬೃಂದಾ ಎಸ್ ಜಿ, ಶೃಷ್ಠಿ ಎರ್.ಜಿ, ಅಜಯ, ಪವನ, ಶ್ರೀ ಶೈಲ್ ಹಾಗೂ ಪೋಷಕರಾದ ಕನಕ ಶಿಬಿರಕಟ್ಟಿ, ಸಿದ್ದು, ರಘು ಪವರ್ ,ಹಾಗೂ ಹಲವಾರು ವಿದ್ಯಾರ್ಥಿಗಳು, ಪೋಷಕರು ಭಾಗವಹಿಸಿದ್ದರು.

# 24ರಂದು ಹಾರಕೂಡ ಚೆನ್ನಬಸವ ಶಿವಯೋಗಿಗಳ ರಥೋತ್ಸವ

**ಕಲಬುರಗಿ:ಡಿ.8–** ಕಲ್ಯಾಣ ಕರ್ನಾಟಕ ಭಾಗದ ಪ್ರಮುಖ ಧಾರ್ಮಿಕ ಕ್ಷೇತ್ರಗಳಲ್ಲಿ ಒಂದಾಗಿರುವ ನೆರೆಯ ಬಸವ ಕಲ್ಯಾಣ ತಾಲೂಕಿನ ಸುಕ್ಷೇತ್ರ ಹಾರಕೂಡದ ಚೆನ್ನಬಸವೇಶ್ವರ ಸಂಸ್ಥಾನ ಹಿರೇಮಠದ ಸದ್ಗುರು ಚೆನ್ನಬಸವ ಶಿವಯೋಗಿಗಳ 74ನೇ ಜಾತ್ರಾ ಮಹೋತ್ಸವ ಮಹಾರಥೋತ್ಸವ ಇದೇ ಡಿ. 24ರಂದು ಸಂಜೆ 6ಕ್ಕೆ ಜರುಗಲಿದೆ.

ರಥೋತ್ಸವದಲ್ಲಿ ನಾಡಿನ ವಿವಿಧ ಭಾಗಗಳ ಸಹಸ್ರಾರು ಭಕ್ತರು ಪಾಲ್ಗೊಳ್ಳಲಿದ್ದು, ಪ್ರಮುಖವಾಗಿ ಮಠದ ಪೀಠಾಧಿಪತಿಗಳಾದ ಡಾ. ಚೆನ್ನವೀರ ಶಿವಾಚಾರ್ಯರ ನೇತೃತ್ವದಲ್ಲಿ ಶಿವಾನುಭವ ಚಿಂತನ ಹಾಗೂ ಜಂಗಿ ಪೈಲ್ವಾನರ ಫೇಟರ್ ಕುಸ್ತಿ ಪಂದ್ಯಗಳು ನಡೆಯಲಿವೆ ಎಂದು ಮಠದ ಭಕ್ತ ಮಂಡಳಿ ತಿಳಿಸಿದೆ.

ಡಿ. 24ರ ರಥೋತ್ಸವ ನಂತರ ಸಂಜೆ 7ಕ್ಕೆ ಶಿವಾನುಭವ ಚಿಂತನ ಕಾರ್ಯಕ್ರಮವು ಇಲಕಲ್ಲದ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ ಗುರು ಮಹಾಂತ ಸ್ವಾಮಿಗಳು, ಸನ್ನಿಧಾನ ಹಾಗೂ ಹುಲಸೂರಿನ ಗುರುಬಸವೇಶ್ವರ ಸಂಸ್ಥಾನ ಮಠದ ಡಾ. ಶಿವಾನಂದ ಮಹಾಸ್ವಾಮಿಗಳ ಅಧ್ಯಕ್ಷತೆಯಲ್ಲಿ ನಡೆಯಲಿದೆ.

ಸಚಿವರಾದ ಈಶ್ವರ ಖಂಡ್ರೆ, ಡಾ. ಶರಣಪ್ರಕಾಶ ಪಾಟೀಲ್, ರಹೀಮ ಖಾನ್, ಕೆಕೆಆರ್ ಡಿಬಿ ಅಧ್ಯಕ್ಷ ಡಾ. ಅಜಯಸಿಂಗ್, ಶಾಸಕರಾದ ಶರಣು ಸಲಗರ, ಡಾ. ಸಿದ್ದಲಿಂಗಪ್ಪ ಪಾಟೀಲ್, ಬಸವರಾಜ ಮತ್ತಿಮಡು, ವಿಧಾನ ಪರಿಷತ್ ಸದಸ್ಯರಾದ ಎಂ.ಜಿ. ಮುಳೆ, ಚಂದ್ರಶೇಖರ ಪಾಟೀಲ್, ಭೀಮರಾವ ಪಾಟೀಲ್ ಹುಮನಾಬಾದ್, ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ. ನಾರಾಯಣರಾವ, ಕಾಡಾ ಅಧ್ಯಕ್ಷ ಬಾಬು ಹೊನ್ನಾನಾಯಕ, ಪ್ರಮುಖರಾದ ಧನರಾಜ ತಾಳಂಪಳ್ಳಿ, ಡಾ. ಸೋಮನಾಥ ಪಟ್ನೆ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಬಸವಂತರಾವ ಶರಣಪ್ಪ ಡೆಂಗಿ ಹಾಗೂ ರಾಜಶೇಖರ ಶಿವಶರಣಪ್ಪ ಮರಗೋಳ ಅವರನ್ನು ಇದೇ ಸಂದರ್ಭದಲ್ಲಿ ಸತ್ಕರಿಸಲಾಗುತ್ತಿದೆ.

ಡಿ. 25ರಂದು ಮಧ್ಯಾಹ್ನ 2ಕ್ಕೆ ಜಂಗಿ ಫೈಲ್ವಾನರ ಫೇಟರ್ ಕುಸ್ತುಗಳು ಜರುಗಲಿವೆ. ಹಿರೇನಾಗಾಂವದ ಜಯಶಾಂತಲಿಂಗ



ಮಹಾಸ್ವಾಮಿಗಳು, ಕಲಬುರಗಿ ಗದ್ದುಗೆ ಮಠದ ಚರಲಿಂಗ ಮಹಾಸ್ವಾಮಿಗಳು, ಗುರುಬಸವ ಮಠದ ಶಿವಾನಂದ ಸ್ವಾಮಿಗಳು ಸಮ್ಮುಖತೆ ವಹಿಸುವರು. ಮಾಜಿ ಸಚಿವ ರಾಜಶೇಖರ ಪಾಟೀಲ್ ಹುಮನಾಬಾದ್ ಅಧ್ಯಕ್ಷತೆ ವಹಿಸುವರು. ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರು ಹಾಗೂ ಆಳಂದ ಕ್ಷೇತ್ರದ ಶಾಸಕ ಬಿ. ಆರ್. ಪಾಟೀಲ್ ಫೇಟರ್ ಕುಸ್ತಿ ಉದ್ಘಾಟನೆ ನೆರವೇರಿಸುವರು. ಮಾಜಿ ಸಚಿವರು, ಮಾಜಿ ಶಾಸಕರು ಸೇರಿದಂತೆ ಇತರ ಗಣ್ಯರು ಪಾಲ್ಗೊಳ್ಳುವರು. ಮರುದಿನ ಡಿ. 26ರಂದು ಪಶು ಪ್ರದರ್ಶನ ಆಯೋಜಿಸಲಾಗಿದ್ದು, ಉತ್ತಮ ಪಶುಗಳಿಗೆ ಯೋಗ್ಯ ಬಹುಮಾನ ಕೊಡಲಾಗುತ್ತಿದೆ.

**ಬಸವ ಭಾನು ಪ್ರಶಸ್ತಿ ಪ್ರದಾನ–**ಜಾತ್ರಾ ಮಹೋತ್ಸವದಲ್ಲಿ ಡಿ. 24ರಂದು ಸಂಜೆ 7ಕ್ಕೆ ನಡೆಯುವ ಶಿವಾನುಭವ ಚಿಂತನ ಕಾರ್ಯಕ್ರಮದಲ್ಲಿ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ ಗುರು ಮಹಾಂತ ಸ್ವಾಮಿಗಳು, ಹಾಗೂ ಹುಲಸೂರಿನ ಗುರುಬಸವೇಶ್ವರ ಸಂಸ್ಥಾನ ಮಠದ ಡಾ. ಶಿವಾನಂದ ಮಹಾಸ್ವಾಮಿಗಳವರಿಗೆ ಹಾರಕೂಡ ಸಂಸ್ಥಾನ ಹಿರೇಮಠದ ವತಿಯಿಂದ ಪೂಜ್ಯ ಡಾ. ಚೆನ್ನವೀರ ಶಿವಾಚಾರ್ಯರು ಬಸವ ಭಾನು ಪ್ರಶಸ್ತಿಯನ್ನು ನೀಡಿ ಗೌರವಿಸುವರು.

# ರಾಮಲಿಂಗಯ್ಯ ಶ್ರೀಗಳಿಗೆ ಗೌರವ ಸಮರ್ಪಣೆ



ಧೈರ್ಯದ ದಾರಿ

**ತಾಳಿಕೋಟಿ,ಡಿ.8–**ತಾಲೂಕಿನ ಚಬನೂರ ಹಿರೇಮಠದ ಪೀಠಾಧಿಪತಿ ಜ್ಯೋತಿಷ್ಯ ರತ್ನ ಪರಮ ಪೂಜ್ಯ ರಾಮಲಿಂಗಯ್ಯ ಮಹಾಸ್ವಾಮಿಗಳಿಗೆ ಅವರ ಧಾರ್ಮಿಕ ಸೇವಾ ಕಾರ್ಯಗಳಿಗಾಗಿ ಸುರಪೂರ ತಾಲೂಕಿನ ನಗನೂರು ಗುಡ್ಡದ ಗುರುಲಿಂಗೇಶ್ವರ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡ ಧರ್ಮಸಭೆ ಕಾರ್ಯಕ್ರಮದಲ್ಲಿ ಗೌರವ ಸಮರ್ಪಣೆ ಸಲ್ಲಿಸಲಾಯಿತು. ನಾಡಿನ ಪೂಜ್ಯ ಮಠಾಧೀಶರು ಹಾಗೂ ಗಣ್ಯ ಮಾನ್ಯರು ಉಪಸ್ಥಿತರಿದ್ದರು.

